# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ ರಾಜ್ಯದಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಗೆ ಸಹಕರಿಸಲು ನೇಮಕವಾಗಿರುವ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಸಂಭಾವನೆಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 36 ನಾಸೇಖಾ 2013, ದಿನಾಂಕ: 25/03/2013.
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 171 ನಾಸೇಖಾ 2012, ದಿನಾಂಕ: 02/04/2013.
5. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಸಿಆಸುಇ 171 ನಾಸೇಖಾ 2012, ದಿನಾಂಕ: 22.04.2013.
6. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: 186 Exp.12/2013, ದಿನಾಂಕ: 28/03/2013.

ಪ್ರಸ್ತಾವನೆ :

ಮೇಲೆ ಓದಲಾದ (1) ರಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ(2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3) ರ ಸರ್ಕಾರದ ಆದೇಶದಲ್ಲಿ ಸಕಾಲ ಮಂಡಳಿ ಹಾಗೂ ಅದಕ್ಕೆ ಮಂಜೂರಾಗಿರುವ ಹುದ್ದೆಗಳನ್ನು ದಿನಾಂಕ: 06/03/2013 ರಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಮುಂದುವರಿಸಲಾಗಿದೆ.

ಮೇಲೆ ಓದಲಾದ (4) ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ರ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾಧಿಕಾರಿಗಳಿಗೆ ಜಿಲ್ಲಾಮಟ್ಟದಲ್ಲಿ ಅನುವಾಗುವಂತೆ ಪ್ರಸ್ತುತ ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ 30 ಜಿಲ್ಲೆಗಳ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಹಾಗೂ ಬಿಬಿಎಂಪಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಸೇವೆಯನ್ನು ಕೆ.ಟಿ.ಟಿ.ಪಿ ಆಕ್ಟ್‌ನ ಸೆಕ್ಷನ್ 4 (ಜಿ)ರ ಪ್ರಕಾರ ದಿನಾಂಕ :01.04.2013ರಿಂದ ಜಾರಿಗೆ ಬರುವಂತೆ ಕಿಯೋನಿಕ್ಸ್ ಸಂಸ್ಥೆಯಿಂದ ತಂದು ಇವರ ಸೇವೆಯನ್ನು ಒಂದು ವರ್ಷದ ಅವಧಿಗೆ ಮುಂದುವರೆಸಲಾಗಿದೆ.

ಮೇಲೆ ಓದಲಾದ (5) ರ ಸರ್ಕಾರದ ತಿದ್ದುಪಡಿ ಆದೇಶದಲ್ಲಿ ಕೆಲವೊಂದು ಮಾರ್ಪಾಡುಗಳನ್ನು ಮಾಡಲಾಗಿದೆ.

ಮೇಲೆ ಓದಲಾದ (6) ರಲ್ಲಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಲಾಗಿದೆ.

ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ, ಜಿಲ್ಲಾಧಿಕಾರಿಗಳಿಗೆ ಸಹಕರಿಸಲು, 30 ಜಿಲ್ಲೆಯ ಜಿಲ್ಲಾಧಿಕಾರಿಗಳು ನೇಮಿಸಿಕೊಂಡಿರುವ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ 6 ತಿಂಗಳ ಅವಧಿಗೆ ಅಂದರೆ, ದಿನಾಂಕ: 01.04.2013ರಿಂದ 30.09.2013ರ ವರೆಗೆ ಸಂಭಾವನೆಯನ್ನು ಪಾವತಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ, ತಗಲುವ ವೆಚ್ಚ ಈ ಕೆಳಕಂಡಂತಿರುತ್ತದೆ.

| ಕ್ರ.ಸಂ. | ವಿವರಣೆ | ಒಟ್ಟು ಮೊತ್ತ |
|---|---|---|
| 1. | ಪ್ರತಿ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಪ್ರತಿ ತಿಂಗಳಿಗೆ ರೂ.23,596/-ಗಳಂತೆ 30 ಜಿಲ್ಲೆಗಳಿಗೂ 6 ತಿಂಗಳ ಅವಧಿಗೆ ಸಂಭಾವನೆಗಾಗಿ ತಗಲುವ ವೆಚ್ಚ. | ರೂ.23,596X30X6= ರೂ.42,47,280/-ಗಳು (ನಲವತ್ತೆರಡು ಲಕ್ಷದ ನಲವತ್ತೇಳು ಸಾವಿರದ ಇನ್ನೂರ ಎಂಬತ್ತು ರೂಪಾಯಿಗಳು ಮಾತ್ರ) |
| 2. | ಪ್ರತಿ ಜಿಲ್ಲೆಗೆ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಪ್ರತಿ ತಿಂಗಳಿಗೆ ರೂ.23,596/-ಗಳಂತೆ 6 ತಿಂಗಳ ಅವಧಿಗೆ ಸಂಭಾವನೆಗಾಗಿ ತಗಲುವ ವೆಚ್ಚ. | ರೂ.23,596X6= ರೂ.1,41,576/-ಗಳು (ಒಂದು ಲಕ್ಷದ ನಲವತ್ತೊಂದು ಸಾವಿರದ ಐದುನೂರ ಎಪ್ಪತ್ತಾರು ರೂಪಾಯಿಗಳು ಮಾತ್ರ) |

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 171 ನಾಸೇಖಾ 2012,**
**ಬೆಂಗಳೂರು, ದಿನಾಂಕ : 10/05/2013**

ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ, ಜಿಲ್ಲಾಧಿಕಾರಿಗಳಿಗೆ ಸಹಕರಿಸಲು, ಜಿಲ್ಲಾಧಿಕಾರಿಗಳು ನೇಮಿಸಿಕೊಂಡಿರುವ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಸಂಭಾವನೆಯನ್ನು ಪ್ರತಿ ತಿಂಗಳಿಗೆ ರೂ.23,596/-(ಇಪ್ಪತ್ಮೂರು ಸಾವಿರದ ಐದು ನೂರ ತೊಂಭತ್ತಾರು ರೂಪಾಯಿಗಳು ಮಾತ್ರ)ಗಳಂತೆ (ಕಿಯೋನಿಕ್ಸ್ ಸಂಸ್ಥೆಯು ನಿಗದಿಪಡಿಸಿರುವ ಸೇವಾ ತೆರಿಗೆ ಹಾಗೂ ಸೇವಾ ಶುಲ್ಕ ಸೇರಿ) ದಿನಾಂಕ: 01/4/2013 ರಿಂದ 30/9/2013 ರವರೆಗೆ ಒಟ್ಟಾರೆ 6 ತಿಂಗಳ ಅವಧಿಗೆ ಪ್ರತಿ ಜಿಲ್ಲೆಗೆ ರೂ.1,41,576/-ಗಳಂತೆ (ಒಂದು ಲಕ್ಷದ ನಲವತ್ತೊಂದು ಸಾವಿರದ ಐದುನೂರ ಎಪ್ಪತ್ತಾರು ರೂಪಾಯಿಗಳು ಮಾತ್ರ) ಒಟ್ಟಾರೆ 30 ಜಿಲ್ಲೆಗಳಿಗೂ ಸೇರಿ ರೂ.42,47,280/- (ನಲವತ್ತೆರಡು ಲಕ್ಷದ ನಲವತ್ತೇಳು ಸಾವಿರದ ಇನ್ನೂರ ಎಂಭತ್ತು ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಸಂಭಾವನೆಯನ್ನು ಕಿಯೋನಿಕ್ಸ್ ಸಂಸ್ಥೆಯ ಮುಖಾಂತರ ಪಾವತಿಸುವಂತೆ ಮಂಜೂರಾತಿ ನೀಡಲಾಗಿದೆ.

ಮೇಲಿನ ವೆಚ್ಚವನ್ನು 2013-14ನೇ ಸಾಲಿನ ಲೆಕ್ಕಶೀರ್ಷಿಕೆ 2052-00-090-0-26-051 (ಯೋಜನೇತರ) ಅಡಿಯಲ್ಲಿ ಭರಿಸತಕ್ಕದ್ದು ಮತ್ತು ಸಂಬಂಧಿಸಿದ ಇಲಾಖೆಯ ಅಧಿಕಾರಿಗೆ ಹಣ ಸೆಳೆಯುವ ಅಧಿಕಾರ ನೀಡಲಾಗಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: 186 Exp.12/2013, ದಿನಾಂಕ: 28/03/2013 ಹಾಗೂ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ:27/04/2012ರಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಎ.ಗಾಯತ್ರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು ಮತ್ತು ರಾಜಕೀಯ ವಿಶ್ರಾಂತಿ ವೇತನ-2)

ಇವರಿಗೆ :

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಖಜಾನಾಧಿಕಾರಿಗಳು
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ(ಆಸು) ವಿಶ್ವೇಶ್ವರಯ್ಯ ದೊಡ್ಡ ಗೋಪುರ, 20ನೇ ಮಹಡಿ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕಿಯೋನಿಕ್ಸ್ ಸಂಸ್ಥೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
11. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ(ಆಸು), ಬೆಂಗಳೂರು.
12. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
13. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.